**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ದೇವದುರ್ಗ ನ್ಯಾಯಾಲಯ, ದೇವದುರ್ಗ.**

**ಸಿ.ಸಿ ನಂ.2/2024**

ಪಿರ್ಯಾದಿದಾರರು : ಗಬ್ಬೂರು ಪೋಲಿಸ್ ಠಾಣೆ.

ವಿರುದ್ಧ

ಆರೋಪಿ: 1. ಕಲ್ಲಪ್ಪ ತಂದೆ ಫಕೀರಪ್ಪ, ವಯಸ್ಸುಃ 40 ವರ್ಷಗಳು,
ಉಃ ಒಕ್ಕಲುತನ, ಸಾಃ ಸೂಗರಾಳ.

**ಭಾರತ ದಂಡ ಸಂಹಿತೆ ಕಲಂ 313 ರ ರಿತ್ಯಾ ಆರೋಪಿಗಳ ಹೇಳಿಕೆಗಳು**

ಪ್ರಶ್ನೆ-1) ನ್ಯಾಯಾಲಯದಲ್ಲಿ ಅಭಿಯೋಜನೆಯ ಪರ ನೀಡಿದ ಸಾಕ್ಷಿದಾರರ ಸಾಕ್ಷ್ಯವನ್ನು ಕೇಳಿಕೊಂಡಿದ್ದಿರಾ ?

ಉತ್ತರಃ

ಪ್ರಶ್ನೆ-2) ಪ್ರಾಸಾ-4 ಹೇಮಂತ ತಂದೆ ರಾಮಣ್ಣ ಇವರು ತಮ್ಮ ಸಾಕ್ಷ್ಯದಲ್ಲಿ ದಿನಾಂಕ 05.09.2023 ರಂದು ಸಂಜೆ 07.10 ಗಂಟೆಗೆ ನಾನು ಠಾಣ ಪ್ರಭಾರದಲ್ಲಿ ಇದ್ದಾಗ ಚಾಸಾ-1 ರವರು ಗಣಕಿಕೃತ ದೂರು ನೀಡಿದ್ದು ಅದರ ಆಧಾರದ ಮೇಲೆ ಠಾಣ ಗುನ್ನ ನಂ.126/2023 ರಲ್ಲಿ ಪ್ರಕರಣ ದಾಖಲು ಮಾಡಿಕೊಂಡು ಪ್ರ.ವ ವರದಿ ತಯಾರಿಸಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಪ್ರಕರಣದ ಮುಂದಿನ ತನಿಖೆಯನ್ನು ದೇವದುರ್ಗ ಸಿಪಿಐ ಇವರಿಗೆ ವಹಿಸಿಕೊಟ್ಟಿರುತ್ತೆನೆ ಎಂದು ನಿಮ್ಮ ವಿರುದ್ದ ಸಾಕ್ಷ್ಯ ನುಡಿದಿದ್ದು, ಈ ಬಗ್ಗೆ ನೀವೆನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-3) ಪ್ರಾಸಾ-5 ಗುಂಡುರಾವ ತಂದೆ ಯಲ್ಲಪ್ಪ ಇವರು ತಮ್ಮ ಸಾಕ್ಷಿಯಲ್ಲಿ ಶಾಲಂ ರವರಿಂದ ಕಡತವನ್ನು ಮುಂದಿನ ತನಿಖೆಗಾಗಿ ದಿನಾಂಕ 07-09-2023 ರಂದು ಪಡೆದಿರುತ್ತೇನೆ. ಅದೇ ದಿನ ಬೆಳಿಗ್ಗೆ 9.30 ರಿಂದ 10.30 ಗಟೆ ವರೆಗೆ ಗಂಗಪ್ಪ ರವರು ತೋರಿಸಿದ ಗುನ್ನೆ ಸ್ಥಳದಲ್ಲಿ ಮೌನೇಶ ಮತ್ತು ಮಾನಪ್ಪ ರವರ ಸಮಕ್ಷಮ ಪಂಚನಾಮೆ ಮಾಡಿರುತ್ತೇನೆ. ನಂತರ ದಿನಾಂಕ 07.09.2023 ರಂದು ಠಾಣ ಆವರಣದಲ್ಲಿ ಮೌನೇಶ

ಮತ್ತು ಮಾನಪ್ಪ ರವರ ಸಮಕ್ಷಮ ಅಪಘಾತಕ್ಕೆ ಒಳಗಾದ ವಾಹನಗಳನ್ನು ಪಂಚನಾಮೆ ಮೂಲಕ ಜಪ್ತಿ ಮಾಡಿಕೊಂಡಿರುತ್ತೇನೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯ ನುಡಿದಿದ್ದು, ಈ ಬಗ್ಗೆ ನೀವೆನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-4) ಫಾಸಾ-5 ರವರು ತಮ್ಮ ಮುಂದುವರೆದ ಮುಖ್ಯವಿಚಾರಣೆಯಲ್ಲಿ ಸದರಿ ಜಪ್ತಿ ಪಂಚನಾಮೆಯನ್ನು ಬೆಳಿಗ್ಗೆ 11 ರಿಂದ 11.30 ಗಂಟೆ ವರೆಗೆ ಮಾಡಿರುತ್ತೇನೆ. ಅದೇ ದಿನ ಸಾಕ್ಷಿದಾರರ ಹೇಳಿಕೆ ಪಡೆದಿರುತ್ತೇನೆ. ನಂತರ ದಿನಾಂಕ 16.09.2023 ರಂದು ಮೋಟರ ವಾಹನ ನೀರಿಕ್ಷಕರಿಗೆ ವಾಹನಗಳ ತಪಾಸಣೆ ಕುರಿತು ಕೋರಿಕೊಂಡ ಮೇರೆಗೆ ಸದರಿಯವರು ತಪಾಸಣೆ ಮಾಡಿ ದಿನಾಂಕ 14.10.2023 ರಂದು ವರದಿ ನೀಡಿರುತ್ತಾರೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯನುಡಿದಿದ್ದು, ಈ ಬಗ್ಗೆ ನೀವೆನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-5) ಫಾಸಾ-5 ರವರು ತಮ್ಮ ಮುಂದುವರೆದ ಮುಖ್ಯವಿಚಾರಣೆಯಲ್ಲಿ ದಿನಾಂಕ 17.09.2023 ರಂದು ಮೃತ ಶಿವಲಿಂಗಪ್ಪನ ಮರಣೋತ್ತರ ಪರೀಕ್ಷ ವರದಿ ಪಡೆದಿರುತ್ತೇನೆ. ದಿನಾಂಕ 25.09.2023 ರಂದು ಆರೋಪಿಯನ್ನು ದಸ್ತಗಿರಿ ಮಾಡಿ ದಸ್ತಗಿರಿ ನಿಯಮಗಳನ್ನು ಪಾಲಿಸಿ ಠಾಣ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯ ನುಡಿದಿದ್ದು, ಈ ಬಗ್ಗೆ ನೀವೆನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-6) ಫಾಸಾ-5 ರವರು ತಮ್ಮ ಮುಂದುವರೆದ ಮುಖ್ಯವಿಚಾರಣೆಯಲ್ಲಿ ನಂತರ ದಿನಾಂಕ 30.10.2023 ವಾಹನದ ಮಾಲೀಕರಿಂದ ಮುಚ್ಚಳಿಕೆ ಪತ್ರ ಪಡೆದು ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ಆರೋಪ ಸಾಭಿತಾಗಿದ್ದರಿಂದ ಅಂತಿಮ ವರದಿ ಸಲ್ಲಿಸಿರುತ್ತೇನೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯನುಡಿದಿದ್ದು, ಈ ಬಗ್ಗೆ ನೀವೆನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-7) ಪ್ರಾಸಾ-6 ಶಾಲಂ ತಂದೆ ಬಂಗಾರಪ್ಪ ಇವರು ತಮ್ಮ ಸಾಕ್ಷಿಯಲ್ಲಿ ದಿನಾಂಕ 06-09-2023 ರಂದು ಬೆಳಿಗ್ಗೆ 9 ರಿಂದ 10 ಗಂಟೆಗೆ ಮೃತ ಶಿವಲಿಂಗಪ್ಪ ಇವರ ಶವ ತನಿಖಾ ವರದಿಯನ್ನು ಪಂಚರ ಸಮಕ್ಷಮ ಆಸ್ಪತ್ರೆಯಲ್ಲಿ ಮಾಡಿರುತ್ತೇನೆ. ಶಿವರಾಜ, ಬಸವರಾಜ ಮತ್ತು ನಿಂಗಪ್ಪ ರವರ ಹೇಳಿಕೆ ಪಡೆದಿರುತ್ತೇನೆ. ಕಡತವನ್ನು ಗುಂಡುರಾವ ರವರಿಗೆ ನೀಡಿರುತ್ತೇನೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯ ನುಡಿದಿದ್ದು, ಈ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-8) ನೀವು ಏನಾದರೂ ಹೇಳುವುದಕ್ಕೆ ಬಯಸುತ್ತೀರಾ?

ಉತ್ತರಃ

ಪ್ರಶ್ನೆ-9) ನೀರು ಸಾಕ್ಷಿ ವಿಚಾರಣೆ ಮಾಡಲು ಬಯಸುತ್ತೀರಾ?

ಉತ್ತರಃ

(ಆರೋಪಿಯ ಹೇಳಿಕೆಯನ್ನು ಸ್ವತಃ ನಾನೆ ನನ್ನ ಸಮಕ್ಷಮ ಪಡೆದಿದ್ದು, ಅವರು ನುಡಿದಿದ್ದನ್ನು ಕೇಳಿಸಿಕೊಂಡು ಅವರು ಹೇಳಿದ್ದನ್ನು ನಮೂದಿಸಿರುತ್ತೇನೆಂದು ದೃಢಿಕರಿಸಿರುತ್ತೇನೆ).

ದಿನಾಂಕಃ 18-05-2026 ಹಿರಿಯ ಸಿವಿಲ್ ನ್ಯಾಯಾಧೀಶರು
ಸ್ಥಳಃ ದೇವದುರ್ಗ. ಮತ್ತು ಜೆ.ಎಂ.ಎಫ್.ಸಿ., ದೇವದುರ್ಗ.